ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 553

ಸದಸ್ಯರ ಹೆಸರು : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 05.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನೌಕರರುಗಳಿಗೆ ವೇತನ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ಒದಗಿಸುವುದು)	ಸರ್ಕಾರದ ನೌಕರರುಗಳ ವೇತನ ಶ್ರೇಣಿಗಳು ಮತ್ತು ಸಾರಿಗೆ ಸಂಸ್ಥೆಗಳಲ್ಲಿ ಜಾರಿಯಲ್ಲಿರುವ ವೇತನ ಶ್ರೇಣಿಗಳು ವಿಭಿನ್ನವಾಗಿವೆ. ಉಳಿದಂತೆ, ನಿಗಮದ ನೌಕರರು ರಾಜ್ಯ ಸರ್ಕಾರದ ಮಾದರಿಯಲ್ಲಿಯೇ ತುಟ್ಟಿಭತ್ಯೆ, ಮನೆಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ, ರಜಾ ಸೌಲಭ್ಯಗಳು, ವೈದ್ಯಕೀಯ ಮರುಪಾವತಿ ಸೌಲಭ್ಯ ಇತ್ಯಾದಿ ಎಲ್ಲಾ ಸೌಲಭ್ಯಗಳನ್ನು ಪಡೆಯುತ್ತಿರುತ್ತಾರೆ.
ಆ)	ಹಾಗಿದ್ದಲ್ಲಿ, ವೇತನ ತಾರತಮ್ಯ ನಿವಾರಿಸಲು ಸರ್ಕಾರದಿಂದ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ; ಯಾವ ಕಾಲಮಿತಿಯೊಳಗೆ ಈ ತಾರತಮ್ಯವನ್ನು ಬಗೆಹರಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)	ಸಾರಿಗೆ ಸಂಸ್ಥೆಯ ನೌಕರರುಗಳಿಗೆ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ವೇತನ ಪರಿಷ್ಕರಣೆ ಮಾಡುವ ಪದ್ಧತಿ ಇದೆ. ವೇತನ ಪರಿಷ್ಕರಣೆ ಸಂಬಂಧ ಆರ್ಥಿಕ ಅಂಶಗಳನ್ನು ಪರಿಗಣಿಸಿ ತೀರ್ಮಾನಿಸಲು ಸಂಸ್ಥೆಗಳ ಹಂತದಲ್ಲಿ ಆಂತರಿಕ ಸಮಿತಿಯನ್ನು ರಚಿಸಲಾಗಿದ್ದು, ಆರ್ಥಿಕ ಪರಿಸ್ಥಿತಿಯನ್ನಾಧರಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 45 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯ ಮಂತ್ರಿಗಳು ಹಾಗೂ
ಸಾರಿಗೆ ಸಚಿವರು